○

# ಕರ್ನಾಟಕ ಸರ್ಕಾರ
# ಕಾಲೇಜು ಶಿಕ್ಷಣ ಇಲಾಖೆ

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಶೇಷಾದ್ರಿ ರಸ್ತೆ, ಬೆಂಗಳೂರು-560 001.

ಸಂಖ್ಯೆ: ಕಾಶಿಇ/ಶೈವಿ/237/SWF/TWF/ಸುತ್ತೋಲೆ/2019-20 ದಿನಾಂಕ:30.12.2022

## ಸುತ್ತೋಲೆ

ವಿಷಯ: ಆಜೀವ ಸದಸ್ಯತ್ವದ ಗುರುತಿನ ಚೀಟಿಗಳನ್ನು ಆನ್‌ಲೈನ್ ಮೂಲಕ ವಿತರಿಸುವ ಕುರಿತು.

ಉಲ್ಲೇಖ: ಕಾರ್ಯದರ್ಶಿಗಳು ಮತ್ತು ಖಜಾಂಚಿಗಳು, ಕರ್ನಾಟಕ ರಾಜ್ಯ ಶಿಕ್ಷಕರ ಕಲ್ಯಾಣ ನಿಧಿ ಹಾಗೂ ವಿದ್ಯಾರ್ಥಿಗಳ ಕ್ಷೇಮಾಭಿವೃದ್ಧಿ ನಿಧಿ, ಬೆಂಗಳೂರು ರವರ ಸುತ್ತೋಲೆ ಸಂಖ್ಯೆ:ಲೆಶಾ5/ಆ.ಜಿ.ಸ.ನೋ/02/2022-23 ದಿನಾಂಕ:14.10.2022.

* * * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಸುತ್ತೋಲೆಯಲ್ಲಿ ಕರ್ನಾಟಕ ರಾಜ್ಯ ಶಿಕ್ಷಕರ ಕಲ್ಯಾಣ ನಿಧಿ ಕಛೇರಿ ವತಿಯಿಂದ ಒದಗಿಸಲಾಗುತ್ತಿರುವ ಎಲ್ಲ ಸೌಲಭ್ಯಗಳನ್ನು Online ಸೇವೆಗೆ ಒಳಪಡಿಸಲಾಗುತ್ತಿದ್ದು, ಪ್ರಥಮ ಹಂತವಾಗಿ ಆಜೀವ ಸದಸ್ಯತ್ವ Online ನೋಂದಣಿ ಕಾರ್ಯವನ್ನು ಪ್ರಾರಂಭಿಸಲಾಗಿದೆ. ಹಾಗೂ ಈಗಾಗಲೇ ನಿಧಿ ಕಛೇರಿಯಿಂದ ಆಜೀವ ಸದಸ್ಯತ್ವ ನೋಂದಣಿ ಸಂಖ್ಯೆ ಪಡೆದು ಭೌತಿಕ ಕಾರ್ಡ್ ಹೊಂದಿರುವ ಉಪನ್ಯಾಸಕರೂ ಸಹ ಕಡ್ಡಾಯವಾಗಿ ತಮ್ಮ ವಿವರಗಳನ್ನು ಸಂಬಂಧಿಸಿದ Online Portal ನಲ್ಲಿ ಗಣಕೀಕರಿಸಿ ಹೊಸದಾಗಿ ಆಜೀವ ಸದಸ್ಯತ್ವ ಸಂಖ್ಯೆಯನ್ನು ಪಡೆಯುವಂತೆ ಸೂಚಿಸಿದೆ. ಹಾಗೂ ಶಿಕ್ಷಕರ ಕಲ್ಯಾಣ ನಿಧಿ ಕಛೇರಿಯ ಎಲ್ಲ ಸೌಲಭ್ಯಗಳನ್ನು ಇನ್ನು ಮುಂದೆ Online ಮೂಲಕವೇ ಒದಗಿಸಲಾಗುವುದು. ಆಜೀವ ಸದಸ್ಯತ್ವ ವಿವರಗಳನ್ನು ಗಣಕೀಕರಿಸಿ ಹೊಸ ಸದಸ್ಯತ್ವ ಸಂಖ್ಯೆಯನ್ನು ಪಡೆದ ನಂತರವೇ ಎಲ್ಲಾ ಸೌಲಭ್ಯಗಳನ್ನು ಪಡೆಯಲು ಅವಕಾಶವಿರುತ್ತದೆ ಎಂದು ತಿಳಿಸಲಾಗಿರುತ್ತದೆ.

ಆದುದರಿಂದ ರಾಜ್ಯದ ಎಲ್ಲಾ ಸರ್ಕಾರಿ / ಖಾಸಗಿ ಅನುದಾನಿತ ಕಾಲೇಜುಗಳ ಉಪನ್ಯಾಸಕರುಗಳು, ಕಾರ್ಯದರ್ಶಿಗಳು ಮತ್ತು ಖಜಾಂಚಿಗಳು, ಕರ್ನಾಟಕ ರಾಜ್ಯ ಶಿಕ್ಷಕರ ಕಲ್ಯಾಣ ನಿಧಿ ಹಾಗೂ ವಿದ್ಯಾರ್ಥಿಗಳ ಕ್ಷೇಮಾಭಿವೃದ್ಧಿ ನಿಧಿ, ಶಿಕ್ಷಕರ ಸದನ, ಕೆಂಪೇಗೌಡ ರಸ್ತೆ, ಬೆಂಗಳೂರು, ರವರ ಸುತ್ತೋಲೆಯನ್ವಯ ಕ್ರಮವಹಿಸಲು ಸೂಚಿಸಲಾಗಿದೆ.

**(ಕರಡು ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ)**

ಅಡಕ: ಸುತ್ತೋಲೆ

ಕಾಲೇಜು ಶಿಕ್ಷಣ ನಿರ್ದೇಶಕರು

**ಇವರಿಗೆ: ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ**

1. ರಾಜ್ಯದ ಎಲ್ಲಾ ಸರ್ಕಾರಿ, ಖಾಸಗಿ ಅನುದಾನಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.
2. ಪ್ರಾದೇಶಿಕ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ ಮತ್ತು ಕಲಬುರಗಿ.
3. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು – ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು ತಿಳಿಸಲಾಗಿದೆ.

**ಪ್ರತಿಯನ್ನು:**

1. ಕಾರ್ಯದರ್ಶಿಗಳು ಮತ್ತು ಖಜಾಂಚಿಗಳು, ಕರ್ನಾಟಕ ರಾಜ್ಯ ಶಿಕ್ಷಕರ ಕಲ್ಯಾಣ ನಿಧಿ ಹಾಗೂ ವಿದ್ಯಾರ್ಥಿಗಳ ಕ್ಷೇಮಾಭಿವೃದ್ಧಿ ನಿಧಿ, ಶಿಕ್ಷಕರ ಸದನ, ಕೆಂಪೇಗೌಡ ರಸ್ತೆ, ಬೆಂಗಳೂರು-560 002.
2. ಕಛೇರಿ ಪ್ರತಿ.